# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕಚೇರಿ ಉಪಯೋಗಕ್ಕಾಗಿ ಸಚಿವಾಲಯದ ಅಧೀನ ಕಾರ್ಯದರ್ಶಿಗಳು ಸರ್ಕಾರಿ ವೆಚ್ಚದಲ್ಲಿ ದಿನಪತ್ರಿಕೆ ಪಡೆಯುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 17 ಸಗ್ರನಿ 97 ದಿ: 27-6-98.
2) ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 35 ಸಗ್ರಇ 97 ದಿ: 6-3-2000.

ಪ್ರಸ್ತಾವನೆ:

ಸರ್ಕಾರಿ ವೆಚ್ಚದಲ್ಲಿ ಸಚಿವರು/ಅಧಿಕಾರಿಗಳು ದಿನಪತ್ರಿಕೆ ಮತ್ತು ನಿಯತಕಾಲಿಕೆಗಳನ್ನು ಪಡೆಯುವ ಬಗ್ಗೆ ಉಲ್ಲೇಖ (1) ರ ಸರ್ಕಾರಿ ಆದೇಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ಉಲ್ಲೇಖ (2) ರ ಸರ್ಕಾರಿ ಆದೇಶದಲ್ಲಿ ಸಂಪುಟ ದರ್ಜೆ ಸಚಿವರು, ರಾಜ್ಯ ಸಚಿವರು ದಿನಪತ್ರಿಕೆ ಮತ್ತು ನಿಯತಕಾಲಿಕೆಗಳನ್ನು ಸರ್ಕಾರಿ ವೆಚ್ಚದಲ್ಲಿ ಪಡೆಯುವ ಬಗ್ಗೆ ಹೇಳಲಾಗಿದೆ.

ಪ್ರಸ್ತುತ ಸಚಿವಾಲಯದಲ್ಲಿ ಉಪ ಕಾರ್ಯದರ್ಶಿ ಹಂತದ ಅಧಿಕಾರಿಗಳಿಗೆ ದಿನಪತ್ರಿಕೆ/ನಿಯತಕಾಲಿಕೆಗಳನ್ನು ಪಡೆಯಲು ಅವಕಾಶ ಮಾಡಿಕೊಡಲಾಗಿದೆ. ಸಚಿವಾಲಯದ ಅಧೀನ ಕಾರ್ಯದರ್ಶಿಗಳು ತಮ್ಮ ವ್ಯಾಪ್ತಿಗೆ ಬರುವ ಶಾಖೆಗೆ ಸಂಬಂಧಿಸಿದ ವಿಷಯಗಳು ದಿನಪತ್ರಿಕೆಗಳಲ್ಲಿ ಪ್ರಕಟವಾದ ಕೂಡಲೇ, ಆ ಬಗ್ಗೆ ಸ್ಪಂದಿಸಿ ಸೂಕ್ತ ಕ್ರಮ ಕೈಗೊಳ್ಳಲು ಅನುಕೂಲವಾಗುವಂತೆ ಸಚಿವಾಲಯದ ಎಲ್ಲ ಅಧೀನ ಕಾರ್ಯದರ್ಶಿಗಳಿಗೂ ಸರ್ಕಾರಿ ವೆಚ್ಚದಲ್ಲಿ ಕಚೇರಿ ಉಪಯೋಗಕ್ಕಾಗಿ ದಿನಪತ್ರಿಕೆಯನ್ನು ಪಡೆಯುವ ಸೌಲಭ್ಯವನ್ನು ಕಲ್ಪಿಸಬೇಕೆಂಬ ವಿಷಯವನ್ನು ಸರ್ಕಾರ ಪರಿಶೀಲಿಸಿದೆ ಮತ್ತು ಈ ಕೆಳಕಂಡಂತೆ ಆದೇಶಿಸುತ್ತದೆ.

## ಸರ್ಕಾರದ ಆದೇಶ ಸಂಖ್ಯೆ ಸಿ.ಆ.ಸು.ಇ 55 ಸಗ್ರಇ 98, ಬೆಂಗಳೂರು ದಿನಾಂಕ 6ನೇ ಏಪ್ರಿಲ್ 2000

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದಾಗಿ ಈ ಕೂಡಲೇ ಜಾರಿಗೆ ಬರುವಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ಅಧೀನ ಕಾರ್ಯದರ್ಶಿಗಳು ಕಚೇರಿಗೆ ಒಂದು ಸ್ಥಳೀಯ ದಿನಪತ್ರಿಕೆಯನ್ನು ಸರ್ಕಾರಿ ವೆಚ್ಚದಲ್ಲಿ ಪಡೆಯಲು ಸರ್ಕಾರ ಮಂಜೂರಾತಿ ನೀಡಿದೆ. ದಿನಪತ್ರಿಕೆಗೆ ಸಂಬಂಧಿಸಿದ ಬಿಲ್‌ಗಳ ಮೇಲೆ ಅಗತ್ಯ ಧೃಡೀಕರಣ ಮಾಡಿ ಪ್ರತಿ ಮೂರು ತಿಂಗಳಿಗೊಮ್ಮೆ ಸಿ.ಆ.ಸು.ಇ (ಲೆಕ್ಕಪತ್ರ) ವಿಭಾಗದಿಂದ ಹಣ ಮರುಪಾವತಿ ಮಾಡಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2052 ಸಚಿವಾಲಯ ಸಾಮಾನ್ಯ ಸೇವೆಗಳು-090 ಸಚಿವಾಲಯ-01 - ಕರ್ನಾಟಕ ಸರ್ಕಾರದ ಸಚಿವಾಲಯ-060-ಇತರೆ ವೆಚ್ಚಗಳು ಶೀರ್ಷಿಕೆಯ ಅಡಿಯಲ್ಲಿ ಭರಿಸಬಹುದಾಗಿದೆ.

ಹಳೆಯ ದಿನಪತ್ರಿಕೆಗಳನ್ನು ಆಯಾ ಕಚೇರಿ ಹಂತದಲ್ಲಿಯೇ ವಿಲೇ ಮಾಡಿಕೊಳ್ಳಬಹುದಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 409 ಪಿ 5-200 ದಿನಾಂಕ 22-3-2000 ರಲ್ಲಿ ನೀಡಿದ ಒಪ್ಪಿಗೆಯ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ
ಸಹಿ/-
(ಎಂ.ಎನ್. ಈರೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ ಹಾಗೂ
ಮುಖ್ಯ ಗ್ರಂಥಾಧಿಕಾರಿ
ಸಿ.ಆ.ಸು.ಇ (ಗ್ರಂಥಾಲಯ)

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಅಧೀನ ಕಾರ್ಯದರ್ಶಿಗಳಿಗೆ.
3. ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು.ಇ (ಲೆಕ್ಕಪತ್ರ).
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3).